ಶ್ರೀ ಬಿ.ಶಿವಣ್ಣ:(ಸಮಾಜ ಕಲ್ಯಾಣ ಸಚಿವರು):- ಮಾನ್ಯಅಧ್ಯಕ್ಷರೆ, ಕರ್ನಾಟಕ ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಬಾಲವಿಕಾಸ ಯೋಜನೆಯು ಕಾರ್ಯರೂಪದಲ್ಲಿದೆ. ಈ ಯೋಜನೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಕೇಂದ್ರ ಸರ್ಕಾರದ ಮಾರ್ಗ ಸೂಚಿಯಂತೆ ಗೌರವ ಸೇವೆಗೆ ಗೌರವ ಧನ ಪಡೆಯುತ್ತಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರು ಗೌರವ ಧನ ಹೆಚ್ಚಿಸುವ ಬಗ್ಗೆ ಬೇಡಿಕೆಯನ್ನು ಸರ್ಕಾರದ ಮುಂದಿಟ್ಟು ಮುಷ್ಕರ ಹೂಡಿದ್ದರು.

ಮುಖ್ಯಮಂತ್ರಿಗಳು ಮತ್ತು ನಾನು ಸಂಘದ ಪದಾಧಿಕಾರಿಗಳೊಂದಿಗೆ ಈ ಬಗ್ಗೆ ಚರ್ಚಿಸಿ ಕೇಂದ್ರ ಸರ್ಕಾರಕ್ಕೆ ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನ ಹೆಚ್ಚಿಸುವ ವಿಚಾರದಲ್ಲಿ ಪತ್ರ ಬರೆಯಲಾಗಿದೆ. ಪ್ರಧಾನ ಮಂತ್ರಿಗಳು ಈ ಬಗ್ಗೆ ಮುಖ್ಯಮಂತ್ರಿಯವರಿಗೆ ಪತ್ರ ಬರೆದು ಈ ವಿಷಯವು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ತಿಳಿಸಿದ್ದಾರೆ. ಅಂಗನವಾಡಿ ಕಾಯಕರ್ತೆಯರ ಗೌರವ ಧನ ಹೆಚ್ಚಿಸುವ ವಿಚಾರದಲ್ಲಿ ನೆರೆ ರಾಜ್ಯಗಳು ರಾಜ್ಯ ಸರ್ಕಾರದ ವತಿಯಿಂದ ಯಾವುದೇ ಹೆಚ್ಚಳವನ್ನು ಮಾಡಿರುವುದಿಲ್ಲ.

ಸಮಗ್ರ ಬಾಲವಿಕಾಸ ಯೋಜನೆಯು ರಾಷ್ಟ್ರ ವ್ಯಾಪ್ತಿ ಕಾರ್ಯಕ್ರಮವಾಗಿರುವುದರಿಂದ ಗೌರವ ಧನ ಹೆಚ್ಚಿಸುವ ವಿಷಯ ಕೇಂದ್ರ ಸರ್ಕಾರವೇ ನಿರ್ಣಯ ತೆಗೆದುಕೊಳ್ಳಬೇಕಾಗುತ್ತದೆ.

ಪ್ರಕಟಣೆ

ಗೈರು ಹಾಜರಿಗೆ ಅನುಮತಿ ಕೋರಿಕೆ

ಛೇರ್ಮನ್:- ವಿಧಾನ ಸಭಾ ಸದಸ್ಯರಾದ ಶ್ರೀ ವೀರೇಂದ್ರ ಪಾಟೀಲ್ ರವರು ದಿನಾಂಕ : 21-02-1992 ರಿಂದ 25-02-92 , 27-02-92 ರಿಂದ 23-03-92 ಹಾಗೂ25-03-1992 ರಿಂದ ಉಪವೇಶನ ಮುಗಿಯುವವರೆಗೆ ಗೈರು ಹಾಜರಾಗಲು ಅನುಮತಿಯನ್ನು ಕೋರಿ ಪತ್ರವನ್ನು ಬರೆದಿರುತ್ತಾರೆ.

"ಶ್ರೀ ವೀರೇಂದ್ರ ಪಾಟಿಲ್ ರವರಿಗೆ ದಿನಾಂಕ : 21-02-1992 ರಿಂದ25-02-1992, 27-02-1992 ರಿಂದ 23-02-1992 ಹಾಗೂ 25-03-1992ರಿಂದ ಸದರಿ ಅಧಿವೇಶನದ ಅಂತ್ಯದವರೆಗೂ ವಿಧಾನ ಸಭೆಯ ಉಪವೇಶಗಳಿಗೆ ಗೈರು ಹಾಜರಾಗಲು ಅನುಮತಿ ಕೊಡಬೇಕೆಂದು ಸದನವು ಅಪೇಕ್ಷಿಸುತ್ತದೆಯೆ".

(ಯಾವ ಸದಸ್ಯರೂ ವಿರೋಧ ವ್ಯಕ್ತಪಡಿಸಿಲ್ಲ)

ಛೇರ್ಮನ್:- ಮಾನ್ಯ ಸದಸ್ಯರಾದ ಶ್ರೀ ವೀರೇಂದ್ರ ಪಾಟೀಲ್‌ರವರಿಗೆ ಗೈರು ಹಾಜರಾಗಲು ಅನುಮತಿಯನ್ನು ನೀಡಲಾಗಿದೆ.

ಶಾಸನ ರಚನಾ ಕಾರ್ಯಕಲಾಪಗಳು

1. 1992ರ, ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಬಂಗಾರಪ್ಪ (ಮುಖ್ಯಮಂತ್ರಿಯವರು):- ಮಾನ್ಯ ಅಧ್ಯಕ್ಷರೆ,1992ರ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಛೇರ್ಮನ್:-ಪ್ರಸ್ತಾವ ಏನೆಂದರೆ :" 1992ರ ಕರ್ನಾಟಕ ಮನರಂಜನಾ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"